



ಅರುಣ ಪಿ. ಭಟ್ಟ

## ವಾರಭವಿಷ್ಯ 07.04.2022 ರಿಂದ 13.04.2022ರವರೆಗೆ.




ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ ಕಾರ್ಯಗಳನ್ನು ಪೂರೈಸಲಾಗುತ್ತದೆ. ನಿಮ್ಮ ಕೆಲಸ ಕಾರ್ಯಗಳ ವಿಸ್ತರಣೆಗೆ ಪ್ರಮುಖ ತೀರ್ಮಾನವೊಂದನ್ನು ಕೈಗೊಳ್ಳಲಿದ್ದೀರಿ. ಶುಭದಿನ 08. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ 09. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಆರೋಗ್ಯ ಸುಧಾರಿಸುವುದು. ಆಸ್ತಿ ಖರಿದಿ ಬಗ್ಗೆ ಚಿಂತನೆ ಮಾಡಲಿದ್ದೀರಿ. ಕಲಾವಿದರಿಗೆ ಮತ್ತು ಸಾಹಿತಿಗಳಿಗೆ ಉತ್ತಮ ಅವಕಾಶ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ ವ್ಯಾವಹಾರಿಕ ಅನುಕೂಲತೆ. ತಂದೆ ತಾಯಿಯವರ ಆರೋಗ್ಯ ಸುಧಾರಣೆ, ಮಾನ,ಮನ್ನಣೆ ದೊರೆಯುವುದು. ಶುಭದಿನ 11. ಚಂಡಿ ಪಾರಾಯಣ ಮಾಡಿರಿ.




ನವೋಲ್ಲಾಸ ಬರುವುದು. ಧರ್ಮ ದಾನಕ್ಕಾಗಿ ಖರ್ಚು. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ. ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರೆಯುವುದು. ಮಕ್ಕಳಿಂದ ಶುಭವಾರ್ತೆ. ಮನೆಯಲ್ಲಿ ಸಂಭ್ರಮ.ಮಕ್ಕಳಿಂದ ಶುಭವಾರ್ತೆ.ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ಶುಭದಿನ 10. ಶಿವ ಕವಚ ಓದಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡಿ ಮುಗಿಸುತ್ತಾರೆ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಶುಭದಿನ 08. ಸೌಂದರ್ಯಲಹರಿ ಪಠಿಸಿರಿ.




ಎಂಜಿನಿಯರ್ ಕ್ಷೇತ್ರದವರಿಗೆ ಈ ಹಿಂದೆಂದಿಗಿಂತ ಹೆಚ್ಚಿನ ಅವಕಾಶಗಳು ಹುಡುಕಿಕೊಂಡು ಬರುತ್ತವೆ. ನಿಮ್ಮಲ್ಲಿ ಆಗುತ್ತಿರುವ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ಸಂಗಾತಿ ಜತೆಗೆ ಇದನ್ನು ಹಂಚಿಕೊಳ್ಳುತ್ತೀರಿ. ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ಇದೇ ಅನುಭವ ವೈವಾಹಿಕ ಜೀವನದಲ್ಲೂ ಮುಂದುವರಿಯಲಿದೆ. ಶುಭದಿನ 12. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಈ ವಾರ ವೈಯಕ್ತಿಕ ಹಾಗೂ ವೃತ್ತಿಪರ ಬದುಕಿನಲ್ಲಿ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಮನೆಗೆ ಎಲೆಕ್ಟ್ರಾನಿಕ್ ವಸ್ತುಗಳ ಖರೀದಿ ಮಾಡಲಿದ್ದೀರಿ. ಸಿನಿಮಾ, ವೈದ್ಯಕೀಯ, ಕಲೆ ಈ ರೀತಿಯ ವೃತ್ತಿಯಲಿ ಇರುವವರಿಗೆ ಅತ್ಯುತ್ತಮವಾದ ಲಾಭ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಬಡ್ತಿ ಪಡೆಯುವ ಅವಕಾಶಗಳಿವೆ. ಶುಭದಿನ 11. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.




ಬಹಳ ಮುಖ್ಯವಾದ ಪಟ್ಟಿಯೊಂದನ್ನು ಸಿದ್ಧ ಮಾಡಿಕೊಳ್ಳುವುದಕ್ಕೆ ವಾರದ ಶುರುವಿನಲ್ಲಿ ಸಿದ್ಧರಾಗುತ್ತೀರಿ. ಇದರಿಂದ ಹಿರಿಯ ಅಧಿಕಾರಿಗಳು ಬೇಸರಿಸಿಕೊಳ್ಳುತ್ತಾರೆ. ಈ ಅವಧಿಯಲ್ಲಿ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ಶುಭದಿನ 10. ಶ್ರೀ ದುರ್ಗಾಪಾರಾಯಣ ಮಾಡಿರಿ.




ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದಪತ್ರಗಳನ್ನು ಕೂಲಂಕಷವಾಗಿ ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿದೆ. ಭುಜದ ನೋವು, ತಲೆನೋವು ಹಾಗೂ ಕಣ್ಣಿನ ಬೇನೆ ನಿಮ್ಮನ್ನು ಕಾಡಲಿದೆ. ಉನ್ನತ ಶಿಕ್ಷಣ ಪಡೆಯಬೇಕು ಎಂದುಕೊಂಡವರಿಗೆ ಪ್ರಗತಿ ಇದೆ. ಶುಭದಿನ 07. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಾರದ ಮಧ್ಯಭಾಗದಲ್ಲಿ ಉದ್ಯೋಗ ನಿಮಿತ್ತವಾಗಿ ಪ್ರಯಾಣ ಮಾಡಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಎಂಜಿನಿಯರ್ ಗಳಿಗೆ ತಾಂತ್ರಿಕ ಜ್ಞಾನ ಹೆಚ್ಚಿಸಿಕೊಳ್ಳುವ ಅವಕಾಶ ದೊರೆಯುತ್ತದೆ. ವಾರದ ಕೊನೆಗೆ ಸ್ವಲ್ಪ ಮಟ್ಟಿಗೆ ಆರೋಗ್ಯ ಸಮಸ್ಯೆ ಕಾಡುವ ಅಪಾಯ ಇದ್ದು, ಮುಖ್ಯವಾದ ಕೆಲಸ ಕಾರ್ಯ ಮುಂದೂಡಬೇಕಾದ ಸನ್ನಿವೇಶ ಎದುರಾಗುತ್ತದೆ. ಶುಭದಿನ 06.ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಲ್ಲಿ ನಿಮ್ಮ ಬಳಿ ಇರುವ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಎಲ್ಲ ಸಾಧ್ಯತೆಗಳಿವೆ. ಶುಭದಿನ 10. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಆರಂಭದಲ್ಲಿ ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು ದೊರೆಯುವ ಸಾಧ್ಯತೆ ಹೆಚ್ಚಿದೆ. ಈ ಅವಧಿಯಲ್ಲಿ ದೇವತಾ ಆರಾಧನೆಗೆ ನಿಮ್ಮ ಶ್ರಮ ಹಾಕುತ್ತೀರಿ. ಬಹಳ ಒತ್ತಡ ಹಾಕಿ ನಿಮ್ಮಿಂದ ಕೆಲಸ ತೆಗೆಸುವ ಯತ್ನಗಳಾಗುತ್ತವೆ. ಈ ಅವಧಿಯಲ್ಲಿ ಉಸಿರಾಟದ ಸಮಸ್ಯೆ ಹಾಗೂ ಕೆಮ್ಮು ನೆಗಡಿ ಕಾಡಬಹುದು. ತಂದೆಗೆ ಅನಾರೋಗ್ಯ ಕಾಡಬಹುದು. ಶುಭದಿನ 08. ಕನಕಧಾರಾ ಸ್ತೋತ್ರ ಪಠಣಮಾಡಿರಿ.